ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಕಾ.ಪಾ.ಅ/ಯ.ವಿ/ಆ.ಅ/ 93 /2024–25

ಕಾರ್ಯಪಾಲಕ ಅಭಿಯಂತರವರ ಕಛೇರಿ
ಯಲಹಂಕ ವಿಭಾಗ, ಬೃ.ಬೆಂ.ಮ.ಪಾ.
ಬೆಂಗಳೂರು 64 ದಿನಾಂಕ: 05/10/2024

ಆಡಳಿತಾತ್ಮಕ ಅನುಮೋದನೆ ಟಿಪ್ಪಣಿ

ವಿಷಯ:– Drilling Of Borewells and Providing Pipelines in 110 Villages Areas of Kempegowda Ward No-01

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಯಲಹಂಕ ಉಪವಿಭಾಗ) ರವರು 2024–25 ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ ಪಿ–3898 ಅನುದಾನದಡಿಯಲ್ಲಿ ಮಂಜೂರಾಗಿರುವ ಕಾಮಗಾರಿಗೆ 2023–24ನೇ ಸಾಲಿನ ಲೋಕೋಪಯೋಗಿ ಇಲಾಖೆಯ ಎಸ್.ಆರ್. ದರಪಟ್ಟಿಯ ದರಗಳನ್ನು ಅನುಸರಿಸಿ ರೂ.100.00 ಲಕ್ಷಗಳಿಗೆ ಅಂದಾಜುಪಟ್ಟಿ ತಯಾರಿಸಿ, ಆಡಳಿತಾತ್ಮಕ ಅನುಮೋದನೆಗಾಗಿ ಸಲ್ಲಿಸಿರುತ್ತಾರೆ.

ಈ ಹಿನ್ನಲೆಯಲ್ಲಿ ಮೇಲ್ಕಂಡ ಕಾಮಗಾರಿಗೆ ಮಾನ್ಯ ವಲಯ ಆಯುಕ್ತರು (ಯ.ವ) ರವರು ಮೂಲ ಕಡತದ ಕಂಡಿಕೆ (07) ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಿರುತ್ತಾರೆ. ಅದರಂತೆ ಮೇಲ್ಕಂಡ ಕಾಮಗಾರಿಗೆ ಮಾನ್ಯ ಆಯುಕ್ತರವರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2023–24 ದಿ:06–12–2023 ರಂತೆ ನೀಡಿರುವ ಅಧಿಕಾರದನ್ವಯ ಈ ಕೆಳಕಂಡ ಷರತ್ತುಗಳಂತೆ ಆಡಳಿತಾತ್ಮಕ ಅನುಮೋದನೆಯನ್ನು ಪುಟ ಸಂಖ್ಯೆ 42 ಕ್ರ.ಸಂ 93 ರಲ್ಲಿ ಆಡಳಿತಾತ್ಮಕ ಅನುಮೋದನೆ ಟಿಪ್ಪಣಿ ನೀಡಲಾಗಿದೆ.

ಷರತ್ತುಗಳು:

1. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ಧಗೊಳಿಸುವುದು.
2. ಧರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೆಟಾ ಧರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
3. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
4. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
5. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.
6. ಬಿ.ಎಂ./ಬಿ.ಸಿ. ಅಳವಡಿಸಿಕೊಂಡಿರುವ ರಸ್ತೆಗಳಿಗೆ ನಿಯಮಾನುಸಾರ ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶದ ವರದಿಗಳನ್ನು ಪಡೆದುಕೊಳ್ಳುವುದು.
7. ಸದರಿ ಕೆಲಸವು ಎಂಬ್ಯಾಕ್‌ಮೆಂಟ್/ಕಾಂಕ್ರೀಟ್/ಡಾಂಬರೀಕರಣ–ಬಿಎಂ–ಬಿಸಿ/WMM-WBM ಕಾಮಗಾರಿಗಳಾಗಿದ್ದಲ್ಲಿ, MORT & H ಅನ್ವಯ ಗುಣಮಟ್ಟ ಪರೀಕ್ಷೆ ಹಾಗೂ Core-cut ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶವನ್ನು ಪಡೆದುಕೊಳ್ಳುವುದು.

ಕಾರ್ಯಪಾಲಕ ಅಭಿಯಂತರರು,
ಯಲಹಂಕ ವಿಭಾಗ
ಬಿ.ಬಿ.ಎಂ.ಪಿ ಬೆಂಗಳೂರು–64

ಪ್ರತಿಯನ್ನು:

1. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ ಸಲ್ಲಿಸಿದೆ.
2. ಮುಖ್ಯ ಲೇಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ ಕಳುಹಿಸಿದೆ.
3. ಕಛೇರಿ ಕಡತಕ್ಕೆ.

Scanned with ACE Scanner